ಪರೀಕ್ಷಾ ತುರ್ತು

ಕರ್ನಾಟಕ ಸರ್ಕಾರ

**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ. ಬೆಂಗಳೂರು-560003**

*****************************************************************************************

ಸಂಖ್ಯೆ:ಎ8/ಎಸ್ಎಸ್ಎಲ್‌ಸಿ/ಪೂಪ-21/24/202-22 ದಿನಾಂಕ:20.09.2021

ತುರ್ತಾಗಿ ಮತ್ತು ಕಡ್ಡಾಯವಾಗಿ ಪರಿಶೀಲಿಸುವುದು

# :: ಸುತ್ತೋಲೆ ::

ವಿಷಯ:-ಸೆಪ್ಟೆಂಬರ್-2021ರ ಮಾಹೆಯಲ್ಲಿ ನಡೆಯಲಿರುವ 2020-21ನೇ ಸಾಲಿನ ಎಸ್.ಎಸ್.ಎಲ್.ಸಿ. ಪೂರಕ ಪರೀಕ್ಷೆಗೆ ಹಾಜರಾಗುತ್ತಿರುವ ವಿದ್ಯಾರ್ಥಿಗಳ ಪ್ರವೇಶ ಪತ್ರ ಪರಿಶೀಲನೆ ಕುರಿತು.

******

2021ನೇ ಸೆಪ್ಟಂಬರ್ ಮಾಹೆಯಲ್ಲಿ ನಡೆಯುವ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಗೆ ಹಾಜರಾಗುತ್ತಿರುವ ವಿದ್ಯಾರ್ಥಿಗಳ ಅಂತಿಮ ಪ್ರವೇಶ ಪತ್ರಗಳನ್ನು ದಿನಾಂಕ:20.09.2021ರಂದು ಮಂಡಳಿಯ ಜಾಲತಾಣದ ಮುಖಾಂತರ ಶಾಲಾ ಲಾಗಿನ್‌ನಲ್ಲಿ ಅಪ್‌ಲೋಡ್ ಮಾಡಲಾಗುವುದು. ಸಂಬಂಧಪಟ್ಟ ಶಾಲಾ ಮುಖ್ಯೋಪಾಧ್ಯಾಯರು ವಿದ್ಯಾರ್ಥಿಗಳ ಪ್ರವೇಶ ಪತ್ರಗಳನ್ನು ಮಂಡಳಿಯ ಜಾಲತಾಣದ ಶಾಲಾ ಲಾಗಿನ್ ಮೂಲಕ ಡೌನ್‌ಲೋಡ್ ಮಾಡಿಕೊಂಡು, ಸದರಿ ಪ್ರವೇಶ ಪತ್ರಗಳಲ್ಲಿ ಯಾವುದೇ ವ್ಯತ್ಯಯಗಳಿಲ್ಲದಿರುವ ಬಗ್ಗೆ ಈ ಕೆಳಕಂಡ ಅಂಶಗಳಂತೆ ಪರಿಶೀಲಿಸುವುದು. ಒಂದು ವೇಳೆ ಏನಾದರೂ ವ್ಯತ್ಯಯಗಳು ಕಂಡು ಬಂದಲ್ಲಿ ಕೂಡಲೇ ಮಂಡಳಿಯ ಸಂಬಂಧಿಸಿದ ಪರಿಶೀಲನಾ ಶಾಖೆಯ ಶಾಖಾಧಿಕಾರಿಗಳ ಗಮನಕ್ಕೆ ತಂದು ಸರಿಪಡಿಸಿಕೊಂಡು ವಿದ್ಯಾರ್ಥಿಗಳಿಗೆ ಸಕಾಲದಲ್ಲಿ ವಿತರಿಸುವುದು.

1. ನಿಮ್ಮ ಶಾಲೆಯಿಂದ ಕಳುಹಿಸಿದ CCERF/CCEPF/CCERR/CCEPR/NSR/NSPR ವಿದ್ಯಾರ್ಥಿಗಳ ಸಂಖ್ಯೆಗೆ ಅನುಸಾರ ನಿಮ್ಮ ಶಾಲೆಗೆ ಸಂಬಂಧಪಟ್ಟಂತೆ ಮಂಡಳಿ ಜಾಲತಾಣದ ಶಾಲಾ ಲಾಗಿನ್‌ನಲ್ಲಿ ಮುದ್ರಿಸಿಕೊಂಡಿರುವ ಪ್ರವೇಶ ಪತ್ರಗಳ ಸಂಖ್ಯೆಗಳು ಸರಿ ಹೊಂದುತ್ತಿವೆಯೆ? ಒಂದು ವೇಳೆ ಸರಿ ಹೊಂದದಿದ್ದಲ್ಲಿ ಯಾವ ಅಭ್ಯರ್ಥಿಯ ಪ್ರವೇಶ ಪತ್ರ ಬಂದಿಲ್ಲವೆಂಬುದನ್ನು ಖಚಿತಪಡಿಸಿಕೊಂಡು ಅಗತ್ಯ ಕ್ರಮಕ್ಕಾಗಿ ಸಮರ್ಥನೆಯೊಂದಿಗೆ/ ದಾಖಲೆಗಳನ್ನು ದಿನಾಂಕ:22.09.2021ರೊಳಗೆ ಕಳುಹಿಸಿಕೊಡುವುದು.
2. ಪ್ರವೇಶ ಪತ್ರದಲ್ಲಿ ಹಾಗೂ ಕೇಂದ್ರ ನಾಮಯಾದಿಪಟ್ಟಿಯಲ್ಲಿ ಭಾವಚಿತ್ರ ಇಲ್ಲದೇ ಇರುವ ವಿದ್ಯಾರ್ಥಿಗೆ ಪರೀಕ್ಷೆ ಬರೆಯಲು ಅನುಮತಿ ನೀಡಲಾಗುವುದಿಲ್ಲ. ಇದರಿಂದ ವಿದ್ಯಾರ್ಥಿಗೆ ಆಗುವ ತೊಂದರೆಗೆ ಸಂಬಂಧಿಸಿದ ಶಾಲಾ ಮುಖ್ಯಸ್ಥರೇ ಜವಾಬ್ದಾರರಾಗಿದ್ದು, ಮಂಡಳಿಯು ಇದರ ಜವಾಬ್ದಾರಿ ಹೊರುವುದಿಲ್ಲ ಎಂದು ಸ್ಪಷ್ಟಪಡಿಸಿದೆ.
3. ಶಾಲಾಲಾಗಿನ್‌ನಿಂದ ಮುದ್ರಿಸಿಕೊಂಡಿರುವ ಪ್ರವೇಶ ಪತ್ರಗಳನ್ನು ಅಭ್ಯರ್ಥಿಗಳಿಗೆ ಕೂಡಲೇ ವಿತರಿಸುವುದು ಹಾಗೂ ಪ್ರವೇಶ ಪತ್ರದಲ್ಲಿ ನೀಡಲಾಗಿರುವ ಸೂಚನೆಗಳನ್ನು ತಪ್ಪದೇ ಪಾಲಿಸುವಂತೆ ತಿಳಿಸುವುದು.

4. NSR ಅಭ್ಯರ್ಥಿಗಳು ಈ ಮೊದಲು ಸಾಮಾನ್ಯ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗೆ ಹಾಜರಾಗುತ್ತಿದ್ದು, ಜೂನ್–2018ರ ಪೂರಕ ಪರೀಕ್ಷೆಯಿಂದ ಆಡಳಿತ ಹಾಗೂ ತಾಂತ್ರಿಕ ಕಾರಣಾಂತರಗಳಿಂದ ಜಿಲ್ಲಾ ಖಾಸಗಿ ಪರೀಕ್ಷಾ ಕೇಂದ್ರಗಳಿಗೆ ಸೇರ್ಪಡೆ ಮಾಡಲಾಗಿದೆ. ಶಾಲಾ ಮುಖ್ಯ ಶಿಕ್ಷಕರು ಸಂಬಂಧಿಸಿದ ಅಭ್ಯರ್ಥಿಗಳಿಗೆ ಮಾಹಿತಿಯನ್ನು ನೀಡುವುದು.
5. ಪ್ರವೇಶ ಪತ್ರವನ್ನು ಪಡೆಯುವಲ್ಲಿ ಅಭ್ಯರ್ಥಿಗಳಿಗೆ ಯಾವುದೇ ತೊಂದರೆಯಾಗದಂತೆ ಸೂಕ್ತ ಕ್ರಮವಹಿಸುವುದು.

ಸೆಪ್ಟೆಂಬರ್–2021ರ ಪೂರಕ ಪರೀಕ್ಷೆಯ ವೇಳಾಪಟ್ಟಿಯಂತೆ ಪರೀಕ್ಷೆಗೆ ಸಕಾಲದಲ್ಲಿ ಹಾಜರಾಗಲು ಸಂಬಂಧಿಸಿದ ಅಭ್ಯರ್ಥಿಗಳಿಗೆ/ಪೋಷಕರಿಗೆ ಮನವರಿಕೆ ಮಾಡಲು ಮುಖ್ಯಶಿಕ್ಷಕರಿಗೆ ತಿಳಿಸಿದೆ.

(ವಿ. ಸುಮಂಗಲ)
ನಿರ್ದೇಶಕರು, ಪರೀಕ್ಷೆಗಳು

ಇವರಿಗೆ,

1. ರಾಜ್ಯದ ಎಲ್ಲಾ ಉಪನಿರ್ದೇಶಕರುಗಳಿಗೆ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ. (ಇ ಮೇಲ್ ಮುಖಾಂತರ)
2. ರಾಜ್ಯದ ಎಲ್ಲಾ ಪ್ರೌಢ ಶಾಲಾ ಮುಖ್ಯಸ್ಥರುಗಳಿಗೆ ಸೂಕ್ತ ಕ್ರಮಕ್ಕಾಗಿ. (ಮಂಡಳಿಯ ಜಾಲತಾಣದ ಶಾಲಾ ಲಾಗಿನ್ ಮೂಲಕ)
3. ನಿರ್ದೇಶಕರು/ಕಾರ್ಯದರ್ಶಿಗಳ ಆಪ್ತ ಶಾಖೆಯ ಮಾಹಿತಿಗಾಗಿ.
4. ಶಾಖಾಧಿಕಾರಿಗಳು ಗಣಕ ಶಾಖೆರವರು ಶಾಲಾ ಲಾಗಿನ್‌ನಲ್ಲಿ ಮತ್ತು ಮಂಡಳಿ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲು ಸೂಕ್ತ ಕ್ರಮಕ್ಕಾಗಿ.
5. ಶಾಖಾಧಿಕಾರಿಗಳು ಬಿ, ಸಿ , ಲೆಕ್ಕಪತ್ರ ಶಾಖೆ ಮತ್ತು ಪರಿಶೀಲನಾ ಶಾಖೆಗಳಿಗೆ ಸೂಕ್ತ ಕ್ರಮ್ಮಕಾಗಿ.
6. ಕಛೇರಿ ಪ್ರತಿ.

**ಸೆಪ್ಟೆಂಬರ್–2021ರ ಎಸ್.ಎಸ್.ಎಲ್.ಸಿ. ಪೂರಕ ಪರೀಕ್ಷೆಯ ತಿದ್ದುಪಡಿ ಮಾಡಲಾದ ಪ್ರವೇಶ ಪತ್ರಗಳ ಪ್ರತಿಗಳನ್ನು ರವಾನಿಸಬೇಕಾದ ಅಧಿಕಾರಿಗಳ ಹೆಸರು ಮತ್ತು ಸಂಬಂಧಿಸಿದ ಜಿಲ್ಲೆಗಳ ಮಾಹಿತಿ.**

| ಕ್ರ ಸಂ | ಶಾಖೆ | ಪರಿಶೀಲನಾ ಅಧಿಕಾರಿಗಳು ಶ್ರೀಮತಿ: ಶ್ರೀ | ಜಿಲ್ಲೆ | ದೂರವಾಣಿ ಸಂಖ್ಯೆ |
|---|---|---|---|---|
| 1 | ಎಫ್ | ಸಂಧ್ಯಾ ಹೆಚ್ ಎಸ್<br>ಸಹಾಯಕ ನಿರ್ದೇಶಕರು | ಬೆಂಗಳೂರು ದಕ್ಷಿಣ / ಹಾವೇರಿ / ಶಿವಮೊಗ್ಗ | 9886846881 |
| 2 | ಜಿ | ನರೇಂದ್ರಕುಮಾರ್<br>ಸಹಾಯಕ ನಿರ್ದೇಶಕರು | ಬೆಂಗಳೂರು ಉತ್ತರ/ಚಿಕ್ಕಬಳ್ಳಾಪುರ/ ಕೋಲಾರ | 9900190492 |
| 3 | ಹೆಚ್ | ಎಂ.ಎನ್.ಶ್ರೀನಿವಾಸ್<br>ಸಹಾಯಕ ನಿರ್ದೇಶಕರು | ಚಿತ್ರದುರ್ಗ/ದಾವಣಗೆರೆ/ಬೆಂಗಳೂರು ಗ್ರಾಮಾಂತರ/ರಾಮನಗರ | 9449052591 |
| 4 | ಐ | ಜಯರಾಮುಡು<br>ಸಹಾಯಕ ನಿರ್ದೇಶಕರು | ಚಾಮರಾಜನಗರ/ಮಂಡ್ಯ/ ತುಮಕೂರು/ ಮಧುಗಿರಿ | 9449674952 |
| 5 | ಜೆ | ಭಾಗ್ಯವತಮ್ಮ<br>ಸಹಾಯಕ ನಿರ್ದೇಶಕರು | ಮೈಸೂರು/ ಹಾಸನ/ ಚಿಕ್ಕಮಗಳೂರು/ ಕೊಡಗು | 9449812887 |
| 6 | ಕೆ | ಗಾಯತ್ರಿದೇವಿ<br>ಹಿರಿಯ ಸಹಾಯಕ ನಿರ್ದೇಶಕರು | ಗದಗ/ ಕೊಪ್ಪಳ/ ಬಿಜಾಪುರ/ ಬಾಗಲಕೋಟೆ | 9986090437 |
| 7 | ಎಲ್ | ಜಯರಾಮುಡು<br>ಸಹಾಯಕ ನಿರ್ದೇಶಕರು | ಧಾರವಾಡ/ ಚಿಕ್ಕೋಡಿ/ ಬೆಳಗಾವಿ | 9449674952 |
| 8 | ಎಂ | ನರೇಂದ್ರಕುಮಾರ್<br>ಸಹಾಯಕ ನಿರ್ದೇಶಕರು | ಮಂಗಳೂರು/ ಉಡುಪಿ/ ಕಾರವಾರ/ಶಿರಸಿ/ ರಾಯಚೂರು | 9900190492 |
| 9 | ಎನ್ | ಸಿ ವಿ ನಟರಾಜ<br>ಹಿರಿಯ ಸಹಾಯಕ ನಿರ್ದೇಶಕರು | ಗುಲ್ಬರ್ಗಾ/ ಯಾದಗಿರಿ/ ಬೀದರ್/ ಬಳ್ಳಾರಿ | 7892937084 |

ಫ್ಯಾಕ್ಸ್ : 080–23347670
ಕಾರ್ಯದರ್ಶಿಗಳು : 080–23445579
ಉಪನಿರ್ದೇಶಕರು(ಆಡಳಿತ) : 080–23562267

- ಪರೀಕ್ಷಾ ಕೇಂದ್ರಗಳಿಗೆ ಸಂಬಂಧಿಸಿದ ಮಾಹಿತಿಗೆ ಸಿ–ಶಾಖೆಯ ಹಿರಿಯ ಸಹಾಯಕ ನಿರ್ದೇಶಕರಿಗೆ ದೂರವಾಣಿ ಸಂಖ್ಯೆ: 080–23349434ಗೆ ಸಂಪರ್ಕಿಸಬಹುದು.
- ಬ್ಯಾಂಕ್ ಚಲನ್ (NEFT) ಸಂಬಂಧಿಸಿದ ಮಾಹಿತಿಗೆ ಮಂಡಳಿಯ ಲೆಕ್ಕಾಧಿಕಾರಿಗಳ ದೂರವಾಣಿ ಸಂಖ್ಯೆ: 080–23561271ಗೆ ಸಂಪರ್ಕಿಸುವುದು.